**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ರವಿಕುಮಾರ್ ಎನ್. ಇವರು**
**ನಿಯಮ–330 ರಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ**

**ವಿಷಯ:** ರಾಜ್ಯ ಸರ್ಕಾರಿ ನೇಮಕಾತಿಯಲ್ಲಿ ನಿರಂತರವಾಗಿ ನಡೆಯುತ್ತಿರುವ ಪರೀಕ್ಷಾ ಅಕ್ರಮಗಳು, ನಕಲು ಮಾಡುವುದು, ಪ್ರಶ್ನೆ ಪತ್ರಿಕೆಗಳ ಸೋರಿಕೆ, ಉತ್ತರ ಪತ್ರಿಕೆ ಮತ್ತು ಓಎಂಆರ್ ಹಾಳೆಗಳನ್ನು ತಿದ್ದುವುದು, ಬ್ಲೂಟೂತ್ ಸಾಧನಗಳಿಂದ ಅಕ್ರಮ ಎಸಗುವುದು, ಅನಧೀಕೃತ ಸ್ಥಳಗಳಲ್ಲಿ ಪರೀಕ್ಷೆ ಬರೆಸುವುದು ಸೇರಿದಂತೆ ಅನೇಕ ಪರೀಕ್ಷಾ ಅಕ್ರಮಗಳು ರಾಜ್ಯದಲ್ಲಿ ನಿರಂತರವಾಗಿ ನಡೆಯುತ್ತಿದೆ. ಕೆ.ಪಿ.ಎಸ್ಸಿ, ಕೆ.ಇ.ಎ ವತಿಯಿಂದ ನಡೆದ ಪ್ರಥಮ ದರ್ಜೆ ಸಹಾಯಕ ಹುದ್ದೆ ಸೇರಿದಂತೆ ಅನೇಕ ನೇಮಕಾತಿಯ ಪರೀಕ್ಷೆಗಳಲ್ಲಿ ಬ್ಲೂಟೂತ್ ಸಾಧನ ಬಳಸಿ ಅಕ್ರಮವೆಸಗಲಾಗುತ್ತಿದ್ದು, ಈ ಪರೀಕ್ಷಾ ಅಕ್ರಮಗಳಲ್ಲಿ ಸರ್ಕಾರಿ ಹಲವು ನೇಮಕಾತಿ ಸಂಸ್ಥೆಗಳಾದ ಕೆ.ಪಿ.ಎಸ್ಸಿ ಕೆ.ಇ.ಎ, ಸೇರಿದಂತೆ ಅನೇಕ ಸಂಸ್ಥೆಗಳ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ದಲ್ಲಾಳಿಗಳು ದುಡ್ಡಿನ ಆಸೆಗಾಗಿ ಅಕ್ರಮಗಳಲ್ಲಿ ಶಾಮೀಲಾಗುತ್ತಿದ್ದು, ಇದರಿಂದ ಬಡ ಪ್ರತಿಭಾವಂತ ವಿದ್ಯಾಥಿಗಳಿಗೆ ತುಂಬಾ ಅನ್ಯಾಯವಾಗುತ್ತಿದ್ದು, ಅವರು ಸರ್ಕಾರಿ ಕೆಲಸದಿಂದ ವಂಚಿತರಾಗುತ್ತಿದ್ದು, ಆದ್ದರಿಂದ ರಾಜ್ಯ ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತವಾಗಿ ಪರಿಹಾರ ಒದಗಿಸಬೇಕು.

**ಉತ್ತರ:** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಪಿಎಸ್ಐ ಮತ್ತು ಪೊಲೀಸ್ ಕಾನ್ಸ್‌ಟೇಬಲ್ ವೃಂದಗಳ ವಿವಿಧ ಹುದ್ದೆಗಳು ಮತ್ತು ಅನುಯಾಯಿ(ಕೆಎಸ್ಆರ್‌ಪಿ) ಮತ್ತು ವಿಧಿವಿಜ್ಞಾನ ಘಟಕದ ವೈಜ್ಞಾನಿಕ ಅಧಿಕಾರಿ, ಅಪರಾಧ ಸ್ಥಳ ಪರಿಶೀಲನಾಧಿಕಾರಿ ಮತ್ತು ಇತರೆ ಹುದ್ದೆಗಳಿಗೆ ನಡೆಸಲಾಗುವ ನೇಮಕಾತಿ ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಲು ಈ ಕೆಳಕಂಡತೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.

- ವಿವಿಧ ವೃಂದದ ಹುದ್ದೆಗಳ ಲಿಖಿತ ಪರೀಕ್ಷೆಗೆ ಪ್ರಶ್ನೆಪತ್ರಿಕೆ ತಯಾರಿಕೆ ಸಮಿತಿಯಲ್ಲಿರುವ ಅಧಿಕಾರಿಗಳ ಹೆಸರುಗಳನ್ನು ಗೌಪ್ಯವಾಗಿ ಇಡಲಾಗುತ್ತದೆ.
- ಪ್ರಶ್ನೆಪತ್ರಿಕೆ ಮುದ್ರಣವನ್ನು ಬಾಹ್ಯ ಸಂಸ್ಥೆಯವರಿಂದ ಮಾಡಿಸಲಾಗುವುದು ಹಾಗೂ ಸದರಿ ಬಾಹ್ಯ ಸಂಸ್ಥೆಯವರ ವಿವರಗಳನ್ನು ಗೌಪ್ಯವಾಗಿ ಇಡಲಾಗುತ್ತದೆ.
- ನೇಮಕಾತಿಯ ಪ್ರಕ್ರಿಯೆಯ ವಿವಿಧ ಹಂತಗಳಾದ ಪ್ರಶ್ನೆ ಪತ್ರಿಕೆ ಸ್ವೀಕರಣೆ, ಸಂಗ್ರಹಣೆ, ವಿತರಣೆ, ಸ್ಕ್ಯಾನಿಂಗ್, ಮೌಲ್ಯಮಾಪನ, ಮತ್ತು ದೈಹಿಕ ಪರೀಕ್ಷೆಗೆ ಪ್ರತ್ಯೇಕ ಅಧಿಕಾರಿಗಳ ಸಮಿತಿಯನ್ನು ರಚಿಸಿ, ಅವರಿಗೆ ಯಾವುದೇ ಬಾಹ್ಯ ಒತ್ತಡ ಇಲ್ಲದಂತೆ ಸ್ವತಂತ್ರವಾಗಿ ನೇಮಕಾತಿಯ ಕರ್ತವ್ಯಗಳನ್ನು ಪಾರದರ್ಶಕವಾಗಿ ಸೂಕ್ತ ರೀತಿಯಲ್ಲಿ ನಿರ್ವಹಿಸಲಾಗುತ್ತಿದೆ.
- ರಾಜ್ಯಾದ್ಯಂತ ನಡೆಯುವ ಪೊಲೀಸ್ ಇಲಾಖೆಯ ವಿವಿಧ ವೃಂದದ ಹುದ್ದೆಗಳ ಲಿಖಿತ ಪರೀಕ್ಷೆ ಹಾಗೂ ದೈಹಿಕ ಪರೀಕ್ಷೆಗಳ ಎಲ್ಲಾ ಹಂತಗಳನ್ನು ದಾಖಲಿಸಲು ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲಾಗುತ್ತಿದೆ.
- ಸದರಿ ಪರೀಕ್ಷೆಗಳನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸಲು ಪ್ರತಿ ಹಂತದಲ್ಲೂ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಭದ್ರತೆ ಹಾಗೂ ಬಂದೋಬಸ್ತ್‌ಗಾಗಿ ನಿಯೋಜಿಸಲಾಗುತ್ತಿದೆ.
- ಲಿಖಿತ ಮತ್ತು ದೈಹಿಕ ಪರೀಕ್ಷೆಗಳಿಗೆ ಹಾಜರಾಗುವ ನಕಲಿ ಅಭ್ಯರ್ಥಿಗಳನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಅಭ್ಯರ್ಥಿಗಳಿಗೆ ಬೆರಳು ಮುದ್ರೆ ಸಂಗ್ರಹವನ್ನು ಬಯೋಮೆಟ್ರಿಕ್ ಯಂತ್ರದ ಮೂಲಕ ಹಾಗೂ ಮುಖ ಚಹರೆಯನ್ನು ವೆಬ್‌ಕ್ಯಾಮರ ಮೂಲಕ ಕಡ್ಡಾಯವಾಗಿ ಪಡೆಯಲಾಗುತ್ತಿದೆ.

151ಕೆ
R:330
SL:31

- ಎಲ್ಲಾ ಪರೀಕ್ಷಾ ಕೇಂದ್ರಗಳ ದ್ವಾರಗಳಲ್ಲಿ Frisking Metal Detector ಗಳನ್ನು ಅಳವಡಿಸಿ ಬ್ಲೂಟೂಥ್ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳನ್ನು ಅಕ್ರಮವಾಗಿ ಬಳಸುವುದನ್ನು ತಡೆಗಟ್ಟಲಾಗುತ್ತಿದೆ.
- ಅಭ್ಯರ್ಥಿಗಳು ಪಡೆಯುವ ಅಂಕಗಳಲ್ಲಿ ಪಾರದರ್ಶಕತೆ ತರುವ ಸಲುವಾಗಿ ಪರೀಕ್ಷಾ ಬರೆಯುವ ಎಲ್ಲಾ ಅಭ್ಯರ್ಥಿಗಳಿಗೆ ಓ.ಎಂ.ಆರ್. ಶೀಟ್‌ನ ಕಾರ್ಬನ್ ಪ್ರತಿಯನ್ನು ನೀಡಲಾಗುವುದು. ಸದರಿ ಕಾರ್ಬನ್ ಪ್ರತಿಯನ್ನು ಬಳಸಿಕೊಂಡು ಅಭ್ಯರ್ಥಿಗಳು ಕೀ ಉತ್ತರಗಳನ್ನು ಬಳಸಿ ಅಂಕಗಳನ್ನು ಪರಿಶೀಲಿಸಿಕೊಳ್ಳಬಹುದಾಗಿರುತ್ತದೆ.
- ಲಿಖಿತ ಪರೀಕ್ಷೆಯಲ್ಲಿ ಇತರೆ ಅಕ್ರಮ ಚಟುವಟಕೆಗಳು ನಡೆಸುವ ಮುನ್ಸೂಚನೆಗಳು ಕಂಡುಬಂದಲ್ಲಿ ಮುಂಜಾಗ್ರತೆಯಾಗಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮತ್ತು ನಿಗಾ ವಹಿಸಬೇಕೆಂದು ಹಾಗೂ ಅವರ ಕಾರ್ಯಚಟುವಟಿಕೆಗಳ ಮೇಲೆ ಗಮನಹರಿಸಿ Preventive Section ಗಳನ್ನು ಅಳವಡಿಸಿ ಇಲಾಖಾ ನಿಯಮಗಳನ್ವಯ ಸೂಕ್ತ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ಅಭ್ಯರ್ಥಿಗಳನ್ನು ಪರೀಕ್ಷಾ ಕೇಂದ್ರಗಳಿಗೆ Randomization ಮೂಲಕ ಹಂಚಿಕೆ ಮಾಡಲಾಗುತ್ತಿದೆ.
- ಪರೀಕ್ಷಾ ರಹಸ್ಯ ಸಾಮಾಗ್ರಿಗಳನ್ನು ಪರೀಕ್ಷಾ ಕೇಂದ್ರಗಳಿಗೆ ಕಳುಹಿಸುವಾಗ ಹಾಗೂ ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳಿಂದ ನೇಮಕಾತಿ ವಿಭಾಗಕ್ಕೆ ಸಾಗಿಸುವಾಗ One Time Lock & Number Lock ಗಳನ್ನು ಅಳವಡಿಸಲಾಗುತ್ತಿದೆ.
- ಪರೀಕ್ಷಾ ಕೇಂದ್ರ ಹಾಗೂ ಪರೀಕ್ಷೆ ನಡೆಯುವ ಸ್ಥಳಗಳ ಗೌಪ್ಯತೆಯ ಹಿನ್ನೆಲೆಯಲ್ಲಿ ಅಭ್ಯರ್ಥಿಗಳಿಗೆ 15 ದಿನಗಳಿಗೆ ಮೊದಲು ಪರೀಕ್ಷಾ ಬರೆಯುವ ಜಿಲ್ಲೆಯ ಮಾಹಿತಿ ಹಾಗೂ ಪರೀಕ್ಷೆ ನಡೆಯುವ 03 ದಿನಗಳ ಮುಂಚಿತವಾಗಿ ಮಾತ್ರ ಪರೀಕ್ಷಾ ಕೇಂದ್ರದ ಮಾಹಿತಿಯನ್ನು ನೀಡಲಾಗುತ್ತಿದೆ.
- ಪರೀಕ್ಷೆ ಬರೆಯುವ ಪೂರ್ವದಲ್ಲಿ ಅಭ್ಯರ್ಥಿಗಳನ್ನು ಪೋಲೀಸ್ ಸಿಬ್ಬಂದಿ ಹಾಗೂ ವೈದ್ಯಕೀಯ ಸಿಬ್ಬಂದಿಗಳ ಮೂಲಕ ತಪಾಸಣೆ ಒಳಪಡಿಸಲಾಗುತ್ತಿದೆ.
- ಲಿಖಿತ ಪರೀಕ್ಷೆ ಪೂರ್ಣಗೊಂಡ ಕೂಡಲೇ ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುತ್ತಿದೆ.
- ಸ್ಕ್ಯಾನಿಂಗ್ ಪ್ರಕ್ರಿಯೆಯನ್ನು ಪ್ರತ್ಯೇಕ ಸಮಿತಿ ರಚಿಸಿ ಅವರ ಮೇಲ್ವಿಚಾರಣೆಯಲ್ಲಿ ನಡೆಸಲಾಗುತ್ತಿದೆ.

ಮುಂದುವರೆದು, ಸ್ವಾಯತ್ತ ಸಂಸ್ಥೆಗಳು, ಪ್ರಾಧಿಕಾರಗಳು, ಮಂಡಳಿಗಳು ಅಥವಾ ನಿಗಮಗಳನ್ನು ಒಳಗೊಂಡಂತೆ ಕರ್ನಾಟಕ ರಾಜ್ಯ ಸರ್ಕಾರದಲ್ಲಿನ ಅಥವಾ ಅದರಡಿಯಲ್ಲಿನ ಯಾವುದೇ ಹುದ್ದೆಗೆ ನೇಮಕಾತಿ ಉದ್ದೇಶಕ್ಕಾಗಿ ನಡೆಸುವ ಸಾರ್ವಜನಿಕ ಪರೀಕ್ಷೆಗಳಲ್ಲಿ ಅನುಚಿತ ಹಾಗೂ ಭ್ರಷ್ಟಾಚಾರದ ವಿಧಾನಗಳ ಬಳಕೆಯನ್ನು ಮತ್ತು ಪ್ರಶ್ನೆ ಪತ್ರಿಕೆಗಳ ಸೋರಿಕೆಯನ್ನು ತಡೆಗಟ್ಟಲು ಕಟ್ಟುನಿಟ್ಟಿನ ಹಾಗೂ ಪರಿಣಾಮಕಾರಿ ಕ್ರಮಗಳಿಗಾಗಿ ಸರ್ಕಾರವು 'ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕ, 2023' ನ್ನು ಜಾರಿಗೆ ತರುವ ಸಂಬಂಧ ಉಭಯ ಸದನಗಳಲ್ಲಿ ವಿಧೇಯಕವನ್ನು ಮಂಡಿಸಲಾಗಿರುತ್ತದೆ.

HD 31 SDN 2023

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು